Akashvani : Bangalore
National Bulletin In Kannada
ಆಕಾಶವಾಣಿ, ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು
13.11.2024 7.35 am

<><*<><>*><>

## ಮುಖ್ಯಾಂಶಗಳು

- ಜಾರ್ಖಂಡ್ ವಿಧಾನಸಭೆ: ಮೊದಲ ಹಂತದಲ್ಲಿ ೪೩ ಕ್ಷೇತ್ರಗಳಿಗೆ ಇಂದು ಮತದಾನ
- ವಯನಾಡ್ ಲೋಕಸಭಾ ಕ್ಷೇತ್ರ ಸೇರಿ ೧೧ ರಾಜ್ಯಗಳ ೩೩ ವಿಧಾನಸಭಾ ಕ್ಷೇತ್ರಗಳಲ್ಲಿ ಇಂದು ಉಪಚುನಾವಣೆ: ಮತದಾನ ಪ್ರಗತಿಯಲ್ಲಿ
- ಬಿಹಾರದಲ್ಲಿ ೧೨ ಸಾವಿರ ಕೋಟಿ ರೂಪಾಯಿ ಮೊತ್ತದ ವಿವಿಧ ಅಭಿವೃದ್ಧಿ ಯೋಜನೆಗಳಿಗೆ ಪ್ರಧಾನಿ ನರೇಂದ್ರ ಮೋದಿ ಶಂಕುಸ್ಥಾಪನೆ
- ಮಹಿಳಾ ಏಷ್ಯನ್ ಹಾಕಿ ಚಾಂಪಿಯನ್ಸ್ ಟೂರ್ನಿ: ಭಾರತ-ಥಾಯ್ಲೆಂಡ್ ಮುಖಾಮುಖಿ

<><*<><>*><>

ಜಾರ್ಖಂಡ್ ವಿಧಾನಸಭಾ ಚುನಾವಣೆಯ ಮೊದಲ ಹಂತದಲ್ಲಿ ೪೩ ಕ್ಷೇತ್ರಗಳಿಗೆ ಇಂದು ಮತದಾನ ಪ್ರಗತಿಯಲ್ಲಿದೆ. ಒಟ್ಟು ೧೫ ಸಾವಿರದ ೩೪೪ ಮತಗಟ್ಟೆಗಳನ್ನು ಸ್ಥಾಪಿಸಲಾಗಿದೆ. ಅತಿಸೂಕ್ಷ್ಮ ೨೨೫ ಮತಗಟ್ಟೆಗಳಲ್ಲಿ ಮತದಾನಕ್ಕೆ ಸಕಲ ವ್ಯವಸ್ಥೆ ಮಾಡಲಾಗಿದೆ. ಒಟ್ಟು ೬೮೩ ಅಭ್ಯರ್ಥಿಗಳು ಕಣದಲ್ಲಿದ್ದು, ಈ ಪೈಕಿ ೭೩ ಮಹಿಳಾ ಅಭ್ಯರ್ಥಿಗಳಾಗಿದ್ದಾರೆ. ಒಂದು ಕೋಟಿ ೩೭ ಲಕ್ಷ ಮತದಾರರು, ಅಭ್ಯರ್ಥಿಗಳ ಭವಿಷ್ಯ ಬರೆಯಲಿದ್ದಾರೆ. ಇದೇ ವೇಳೆ, ೧೧ ರಾಜ್ಯಗಳ ೩೩ ವಿಧಾನಸಭಾ ಕ್ಷೇತ್ರಗಳ ಉಪಚುನಾವಣೆಗೆ ಮತ್ತು ಕೇರಳದ ವಯನಾಡ್ ಲೋಕಸಭಾ ಸ್ಥಾನಕ್ಕೆ ಇಂದು ಮತದಾನ ನಡೆಯುತ್ತಿದೆ. ೩೩ ವಿಧಾನಸಭಾ ಕ್ಷೇತ್ರಗಳ ಪೈಕಿ ಕರ್ನಾಟಕದಲ್ಲಿ ಮೂರು, ರಾಜಸ್ಥಾನದ ಏಳು, ಪಶ್ಚಿಮ ಬಂಗಾಳದ ಆರು, ಅಸ್ಸಾಂನಲ್ಲಿ ಐದು, ಬಿಹಾರದಲ್ಲಿ ನಾಲ್ಕು, ಮಧ್ಯಪ್ರದೇಶ ಮತ್ತು ಸಿಕ್ಕಿಂನಲ್ಲಿ ತಲಾ ಎರಡು ಸ್ಥಾನಗಳು ಸೇರಿವೆ. ಅಲ್ಲದೇ ಕೇರಳ, ಛತ್ತೀಸ್‌ಗಢ, ಗುಜರಾತ್, ಮೇಘಾಲಯದಲ್ಲಿ ತಲಾ ಒಂದು ವಿಧಾನಸಭೆ ಸ್ಥಾನಕ್ಕೆ ಉಪಚುನಾವಣೆ ನಡೆಯುತ್ತಿದ್ದು, ಮತದಾನ ಪ್ರಗತಿಯಲ್ಲಿದೆ.

<><*<><>*><>

ಕರ್ನಾಟಕದ ಮೂರು ವಿಧಾನಸಭಾ ಕ್ಷೇತ್ರಗಳಾದ ರಾಮನಗರ ಜಿಲ್ಲೆಯ ಚನ್ನಪಟ್ಟಣ, ಬಳ್ಳಾರಿ ಜಿಲ್ಲೆಯ ಸಂಡೂರು ಹಾಗೂ ಹಾವೇರಿ ಜಿಲ್ಲೆಯ ಶಿಗ್ಗಾಂವಿ ಕ್ಷೇತ್ರಗಳಿಗೆ ಇಂದು ಉಪಚುನಾವಣೆ ನಡೆಯುತ್ತಿದ್ದು, ಮತದಾನ ಪ್ರಗತಿಯಲ್ಲಿದೆ. ಚನ್ನಪಟ್ಟಣದಲ್ಲಿ ಎನ್.ಡಿ.ಎ ಅಭ್ಯರ್ಥಿ, ಶಿಗ್ಗಾಂವಿ ಹಾಗೂ ಸಂಡೂರಿನಲ್ಲಿ ಬಿಜೆಪಿ ಅಭ್ಯರ್ಥಿಗಳು ಕಣದಲ್ಲಿದ್ದಾರೆ. ಈ ಮೂರು ಕ್ಷೇತ್ರಗಳಲ್ಲಿ ಕಾಂಗ್ರೆಸ್, ತನ್ನ ಅಭ್ಯರ್ಥಿಗಳನ್ನು ಕಣಕ್ಕಿಳಿಸಿದೆ. ಮತದಾನಕ್ಕಾಗಿ ಮೂರೂ ಕ್ಷೇತ್ರಗಳಲ್ಲಿ ವ್ಯಾಪಕ ಭದ್ರತಾ ವ್ಯವಸ್ಥೆ ಮಾಡಲಾಗಿದೆ. ಸಂಡೂರಿನಲ್ಲಿ ೨ ಲಕ್ಷ ೩೬ ಸಾವಿರದ ೧೦೦ ಮತದಾರರಿದ್ದು, ೨೫೩

ಮತಗಟ್ಟೆಗಳ ಪೈಕಿ ೧೨೭ ಬೂತ್‌ಗಳಲ್ಲಿ ವೆಬ್‌ಕ್ಯಾಸ್ಟಿಂಗ್ ನಡೆಯುತ್ತಿದೆ. ಶಿಗ್ಗಾಂವಿಯಲ್ಲಿ ೧೯೬ ಮತಗಟ್ಟೆಗಳಲ್ಲಿ ೨ ಲಕ್ಷ ೩೭ ಸಾವಿರದ ೬೬೯ ಮತದಾರರು ಮತದಾನ ಮಾಡಲಿದ್ದು, ೧೨೧ ಬೂತ್‌ಗಳಲ್ಲಿ ವೆಬ್‌ಕಾಸ್ಟಿಂಗ್ ನಡೆಯುತ್ತಿದೆ. ಚನ್ನಪಟ್ಟಣದಲ್ಲಿ ೨೭೬ ಮತಗಟ್ಟೆಗಳಲ್ಲಿ ೨ ಲಕ್ಷ ೩೨ ಸಾವಿರದ ೯೪೯ ನೋಂದಾಯಿತ ಮತದಾರರಿದ್ದು, ಎಲ್ಲಾ ೨೭೬ ಬೂತ್‌ಗಳಲ್ಲಿ ವೆಬ್‌ಕ್ಯಾಸ್ಟಿಂಗ್ ನಡೆಯುತ್ತಿದೆ. ಇದೇ ೨೩ರಂದು ಫಲಿತಾಂಶ ಪ್ರಕಟವಾಗಲಿದೆ.

<><*<><>*><>

ಇದೇ ೨೦ ರಂದು ಒಂದೇ ಹಂತದಲ್ಲಿ ನಡೆಯಲಿರುವ ಮಹಾರಾಷ್ಟ್ರ ವಿಧಾನಸಭಾ ಚುನಾವಣೆಗೆ ವಿವಿಧ ರಾಜಕೀಯ ಪಕ್ಷಗಳ ಚುನಾವಣಾ ಕಾರ್ಯ ಬಿರುಸಿನಿಂದ ಸಾಗಿದೆ. ಚಂದ್ರಪುರ ಜಿಲ್ಲೆಯ ಚಿಮುರ್‌ನಲ್ಲಿ ನಿನ್ನೆ ಚುನಾವಣಾ ರ್‍ಯಾಲಿಯನ್ನುದ್ದೇಶಿಸಿ ಮಾತನಾಡಿದ ಪ್ರಧಾನಿ ನರೇಂದ್ರ ಮೋದಿ, ರಾಜ್ಯದ ಮಹಾಯುತಿ ಸರ್ಕಾರ ತೀವ್ರಗತಿಯಲ್ಲಿ ಅಭಿವೃದ್ಧಿ ಕಾರ್ಯ ಕೈಗೊಂಡಿದೆ ಎಂದು ಶ್ಲಾಘಿಸಿದರು. ಮಹಾಯುತಿ ಸರ್ಕಾರದ ಕ್ರಮಗಳಿಂದಾಗಿ, ಕಳೆದ ಎರಡು ವರ್ಷಗಳಲ್ಲಿ ಮಹಾರಾಷ್ಟ್ರ, ಅತಿ ಹೆಚ್ಚಿನ ವಿದೇಶಿ ನೇರ ಹೂಡಿಕೆಯನ್ನು ಕಂಡಿದೆ. ಈ ಬಾರಿಯ ಪ್ರಣಾಳಿಕೆಯಲ್ಲಿ ರಾಜ್ಯದ ಬೆಳವಣಿಗೆಗೆ ಹಲವಾರು ಉತ್ತಮ ಭರವಸೆಗಳನ್ನು ನೀಡಲಾಗಿದೆ ಎಂದು ಪ್ರಧಾನಿ ಹೇಳಿದರು. ಬಿಜೆಪಿ ಹಿರಿಯ ನಾಯಕ ಗೃಹ ಸಚಿವ ಅಮಿತ್ ಶಾ, ಘಾಟ್‌ಕೋಪರ್‌ನಲ್ಲಿ ಸಾರ್ವಜನಿಕ ಸಭೆಯಲ್ಲಿ ಪಾಲ್ಗೊಂಡು ಮತಯಾಚಿಸಿದರು. ಹಾಗೆಯೇ ಕೇಂದ್ರ ಸಚಿವ ನಿತಿನ್ ಗಡ್ಕರಿ, ಲಾತೂರ್ ಜಿಲ್ಲೆಯ ದಿಯೋನಿಯಲ್ಲಿ ನಡೆದ ರ್‍ಯಾಲಿಯಲ್ಲಿ ಪಾಲ್ಗೊಂಡರು. ಎನ್‌ಸಿಪಿ-ಎಸ್‌ಪಿಯ ನಾಯಕಿ ಸುಪ್ರಿಯಾ ಸುಳೆ, ಮಹಾವಿಕಾಸ್ ಅಘಾಡಿ ಮೈತ್ರಿಕೂಟದ ಅಭ್ಯರ್ಥಿಯ ಪರವಾಗಿ ಘಡ್ಚಿರೋಲಿಯ ಅಹೇರಿಯಲ್ಲಿ ಚುನಾವಣಾ ಪ್ರಚಾರ ನಡೆಸಿದರು. ಎನ್‌ಸಿಪಿ-ಎಸ್‌ಪಿ, ಶಿವಸೇನೆ-ಯುಬಿಟಿ, ಪಕ್ಷದ ನಾಯಕರು ರಾಜ್ಯದ ವಿವಿಧೆಡೆ ಚುನಾವಣಾ ರ್‍ಯಾಲಿಗಳನ್ನು ನಡೆಸಿ ಮತಯಾಚಿಸಿದರು.

<><*<><>*><>

ಕೇಂದ್ರಾಡಳಿತ ಪ್ರದೇಶವಾದ ದಾದ್ರಾ ಮತ್ತು ನಗರ ಹವೇಲಿ ಹಾಗೂ ದಮನ್ ಮತ್ತು ದಿಯುಗೆ ಮೂರು ದಿನಗಳ ಭೇಟಿಯಲ್ಲಿರುವ ರಾಷ್ಟ್ರಪತಿ ದ್ರೌಪದಿ ಮುರ್ಮು ಅವರು, ಸಿಲ್ವಾಸ್ಸಾದಲ್ಲಿರುವ ನಮೋ ವೈದ್ಯಕೀಯ ಶಿಕ್ಷಣ ಮತ್ತು ಸಂಶೋಧನಾ ಸಂಸ್ಥೆಗೆ ಇಂದು ಭೇಟಿ ನೀಡಲಿದ್ದಾರೆ. ಸಂಸ್ಥೆಯ ವಿದ್ಯಾರ್ಥಿಗಳು ಮತ್ತು ಅಧ್ಯಾಪಕರೊಂದಿಗೆ ರಾಷ್ಟ್ರಪತಿ ಸಂವಾದ ನಡೆಸಲಿದ್ದಾರೆ. ನಂತರ ಅವರು, ಝುಂಡಾ ಚೌಕ್ ಶಾಲೆಯನ್ನು ಉದ್ಘಾಟಿಸಿ, ಸಿಲ್ವಾಸ್ಸಾದಲ್ಲಿ ಸಾರ್ವಜನಿಕ ಸಮಾರಂಭವನ್ನು ಉದ್ದೇಶಿಸಿ ಮಾತನಾಡಲಿದ್ದಾರೆ. ದಿಯುನಲ್ಲಿರುವ ಐಎನ್‌ಎಸ್ ಖುಕ್ರಿ ಸ್ಮಾರಕಕ್ಕೂ ರಾಷ್ಟ್ರಪತಿ ಭೇಟಿ ನೀಡಲಿದ್ದಾರೆ.

<><*<><>*><>

ಜೈವಿಕ ಇಂಧನ ಮಿಶ್ರಣದಿಂದ ಭಾರತಕ್ಕೆ ಆಮದು ವೆಚ್ಚದಲ್ಲಿ ೯೧ ಸಾವಿರ ಕೋಟಿ ರೂಪಾಯಿ ಕಡಿತಗೊಳಿಸಬಹುದಾಗಿದ್ದು, ಈ ಉಳಿತಾಯ ಕೃಷಿ ಕ್ಷೇತ್ರಕ್ಕೆ ಲಾಭದಾಯಕವಾಗಲಿದೆ ಎಂದು

ಕೇಂದ್ರ ಪೆಟ್ರೋಲಿಯಂ ಮತ್ತು ನೈಸರ್ಗಿಕ ಅನಿಲ ಸಚಿವ ಹರ್ದೀಪ್ ಸಿಂಗ್ ಪುರಿ ಹೇಳಿದ್ದಾರೆ. ಬೆಂಗಳೂರಿನಲ್ಲಿ ನಿನ್ನೆ ೨೭ನೇ ಇಂಧನ ತಂತ್ರಜ್ಞಾನ ಶೃಂಗಸಭೆಯನ್ನು ಉದ್ಘಾಟಿಸಿ ಮಾತನಾಡಿದ ಅವರು, ಜೈವಿಕ ಇಂಧನ ಮಿಶ್ರಣದಲ್ಲಿ ಭಾರತ, ಜಾಗತಿಕವಾಗಿ ಎರಡನೇ ಸ್ಥಾನದಲ್ಲಿದೆ. ಮುಂದಿನ ವರ್ಷದ ವೇಳೆಗೆ ನಿಗದಿತ ಅವಧಿಗಿಂತ ಮುಂಚಿತವಾಗಿ ಶೇಕಡಾ ೨೦ ರಷ್ಟು ಜೈವಿಕ ಇಂಧನ ಮಿಶ್ರಣದ ಗುರಿಯನ್ನು ಸಾಧಿಸುವ ಹಾದಿಯಲ್ಲಿದೆ ಎಂದರು. ಭಾರತ, ಹಸಿರು ಜಲಜನಕದ ಗುರಿಯತ್ತ ಮುನ್ನಡೆಯುತ್ತಿದ್ದು, ಭಾರತೀಯ ಸಂಸ್ಕರಣಾಗಾರಗಳು ಹಸಿರು ಶಕ್ತಿಗೆ ಪರಿವರ್ತನೆಯಾಗುತ್ತಿದ್ದಂತೆ, ದೇಶ ತನ್ನ ಹಸಿರು ಹೈಡ್ರೋಜನ್ ಗುರಿಗಳತ್ತ ಮುನ್ನಡೆಯುತ್ತಿದೆ. ೨೦೪೭ರ ವೇಳೆಗೆ ಭಾರತದ ಇಂಧನ ಬೇಡಿಕೆಯು ೨.೫ ಪಟ್ಟು ಹೆಚ್ಚುವ ನಿರೀಕ್ಷೆಯಿದೆ ಎಂದು ತಿಳಿಸಿದರು. ಪ್ರಸ್ತುತ ಕಚ್ಚಾ ತೈಲ ಸಂಸ್ಕರಣಾ ಸಾಮರ್ಥ್ಯ, ವಾರ್ಷಿಕವಾಗಿ ೪೦೦ ರಿಂದ ೪೫೦ ಮಿಲಿಯನ್ ಮೆಟ್ರಿಕ್ ಟನ್‌ಗಳಷ್ಟಿದ್ದು, ಜಾಗತಿಕ ಸರಾಸರಿಯ ಮೂರನೇ ಒಂದು ಭಾಗದಷ್ಟಿದೆ ಎಂದರು.

<><*<><>*><>

ಪ್ರಧಾನಿ ನರೇಂದ್ರ ಮೋದಿ ಅವರು ಇಂದು ಬಿಹಾರದ ದರ್ಭಾಂಗಕ್ಕೆ ಭೇಟಿ ನೀಡಲಿದ್ದು, ರಾಜ್ಯದಲ್ಲಿ ೧೨ ಸಾವಿರ ಕೋಟಿ ರೂಪಾಯಿಗೂ ಅಧಿಕ ಮೊತ್ತದ ವಿವಿಧ ಅಭಿವೃದ್ಧಿ ಯೋಜನೆಗಳನ್ನು ಉದ್ಘಾಟಿಸಿ, ಶಂಕುಸ್ಥಾಪನೆ ನೆರವೇರಿಸಲಿದ್ದಾರೆ. ಈ ಪ್ರದೇಶದಲ್ಲಿ ಆರೋಗ್ಯ ಮೂಲಸೌಕರ್ಯಕ್ಕೆ ಆದ್ಯತೆ ನೀಡಲು, ೧ ಸಾವಿರದ ೨೬೦ ಕೋಟಿ ರೂಪಾಯಿ ಮೌಲ್ಯದ, ದರ್ಭಾಂಗದ ಏಮ್ಸ್‌ಗೆ ಪ್ರಧಾನಿ ಶಂಕುಸ್ಥಾಪನೆ ನೆರವೇರಿಸಲಿದ್ದಾರೆ. ಇದು ಸೂಪರ್ ಸ್ಪೆಷಾಲಿಟಿ ಆಸ್ಪತ್ರೆಯಾಗಲಿದ್ದು, ಆಯುಷ್ ಬ್ಲಾಕ್, ವೈದ್ಯಕೀಯ ಕಾಲೇಜು, ನರ್ಸಿಂಗ್ ಕಾಲೇಜು, ಮತ್ತು ವಸತಿ ಸೌಲಭ್ಯಗಳನ್ನು ಹೊಂದಿರುತ್ತದೆ. ಪ್ರಧಾನಮಂತ್ರಿಯವರು ೬ ಸಾವಿರದ ೮೦೦ ಕೋಟಿ ರೂಪಾಯಿಗಳ ವಿವಿಧ ರಾಷ್ಟ್ರೀಯ ಹೆದ್ದಾರಿ ಯೋಜನೆಗಳು ಮತ್ತು ರೈಲ್ವೆ ಯೋಜನೆಗಳ ಉದ್ಘಾಟನೆ ಮತ್ತು ಶಿಲಾನ್ಯಾಸ ನೆರವೇರಿಸಲಿದ್ದಾರೆ. ಇದೇ ವೇಳೆ, ಭಾರತದಾದ್ಯಂತ ವಿವಿಧ ರೈಲು ನಿಲ್ದಾಣಗಳಲ್ಲಿ ಹದಿನೆಂಟು, ಪ್ರಧಾನಮಂತ್ರಿ ಭಾರತೀಯ ಜನೌಷಧಿ ಕೇಂದ್ರಗಳನ್ನು ವರ್ಚುಯಲ್ ಮೂಲಕ ಉದ್ಘಾಟಿಸಲಿದ್ದಾರೆ. ಪೆಟ್ರೋಲಿಯಂ ಮತ್ತು ನೈಸರ್ಗಿಕ ಅನಿಲ ವಲಯದ ೪ ಸಾವಿರದ ೨೦ ಕೋಟಿ ರೂಪಾಯಿಗಳಿಗೂ ಹೆಚ್ಚು ಮೌಲ್ಯದ ಹಲವು ಉಪಕ್ರಮಗಳಿಗೆ ಪ್ರಧಾನಿ ಅಡಿಪಾಯ ಹಾಕಲಿದ್ದಾರೆ.

<><*<><>*><>

೨೦೩೦ರ ಗಡುವಿನ ಮೊದಲೇ ಭಾರತ ಮತ್ತು ರಷ್ಯಾ ೧೦೦ ಬಿಲಿಯನ್ ಡಾಲರ್ ಮೌಲ್ಯದ ವ್ಯಾಪಾರ ವಹಿವಾಟು ಗುರಿಯನ್ನು ತಲುಪಲಿದೆ ಎಂದು ವಿದೇಶಾಂಗ ವ್ಯವಹಾರಗಳ ಸಚಿವ ಡಾ. ಎಸ್. ಜೈಶಂಕರ್ ವಿಶ್ವಾಸ ವ್ಯಕ್ತಪಡಿಸಿದ್ದಾರೆ. ವ್ಯಾಪಾರ, ಆರ್ಥಿಕತೆ, ವೈಜ್ಞಾನಿಕ, ತಾಂತ್ರಿಕ, ಸಾಂಸ್ಕೃತಿಕ ಸಹಕಾರದ ೨೫ನೇ ಭಾರತ-ರಷ್ಯಾ ಅಂತರ-ಸರ್ಕಾರಿ ಅಧಿವೇಶನದಲ್ಲಿ ಮಾತನಾಡಿದ ಅವರು, ರಷ್ಯಾ, ಭಾರತದ ಕಚ್ಚಾತೈಲ ಮತ್ತು ರಸಗೊಬ್ಬರಗಳ ಪ್ರಮುಖ ಮೂಲವಾಗಿದೆ. ಭಾರತದ ಔಷಧೀಯ ಉದ್ಯಮದ ರಫ್ತು ರಷ್ಯಾಕ್ಕೆ ಮೌಲ್ಯಯುತವಾಗಿದೆ

ಎಂದರು. ವ್ಯಾಪಾರ ಕ್ಷೇತ್ರದಲ್ಲಿ ಅಡೆತಡೆಗಳ ಹೊರತಾಗಿಯೂ, ಎರಡೂ ದೇಶಗಳು ಅಂತಾರಾಷ್ಟ್ರೀಯ ಉತ್ತರ-ದಕ್ಷಿಣ ಸಾರಿಗೆ ಕಾರಿಡಾರ್, ಚೆನ್ನೈ-ವ್ಲಾಡಿವೋಸ್ಟಾಕ್ ಕಾರಿಡಾರ್ ಮತ್ತು ಉತ್ತರ ಸಮುದ್ರ ಮಾರ್ಗಗಳಿಗೆ ಸಂಬಂಧಿಸಿದಂತೆ ಜಂಟಿ ಪ್ರಯತ್ನಗಳನ್ನು ಮುಂದುವರಿಸಬೇಕು ಎಂದು ಅವರು ಒತ್ತಿ ಹೇಳಿದರು. ಬಾರತಕ್ಕೆ ಮೊದಲ ಬಾರಿ ಭೇಟಿ ನೀಡಿರುವ ರಷ್ಯಾ ಉಪಪ್ರಧಾನಿ ಮಾಂಟುರೋವ್, ಕಳೆದ ಐದು ವರ್ಷಗಳಲ್ಲಿ, ಎರಡೂ ದೇಶಗಳ ನಡುವಿನ ವ್ಯಾಪಾರ ವಹಿವಾಟು ಐದು ಪಟ್ಟು ಹೆಚ್ಚು ಬೆಳೆದಿದ್ದು. ರಷ್ಯಾದ ಎಲ್ಲಾ ವಿದೇಶಿ ಆರ್ಥಿಕ ಪಾಲುದಾರರಲ್ಲಿ ಭಾರತ ಈಗ ಎರಡನೇ ಸ್ಥಾನದಲ್ಲಿದೆ ಎಂದರು.

<><*<><>*><>

ಬಿಹಾರದ ರಾಜ್‌ಗಿರ್‌ನಲ್ಲಿ ನಡೆಯುತ್ತಿರುವ ಮಹಿಳಾ ಏಷ್ಯನ್ ಹಾಕಿ ಚಾಂಪಿಯನ್ಸ್ ಟೂರ್ನಿಯಲ್ಲಿಂದು, ಹಾಲಿ ಚಾಂಪಿಯನ್ ಭಾರತ, ಥಾಯ್ಲೆಂಡ್ ವಿರುದ್ಧ ಸೆಣಸಲಿದೆ. ಪಂದ್ಯ ಸಂಜೆ ೪.೪೫ಕ್ಕೆ ಆರಂಭವಾಗಲಿದೆ. ನಿನ್ನೆ ನಡೆದ ತೀವ್ರ ಹಣಾಹಣಿಯ ಪಂದ್ಯದಲ್ಲಿ ಭಾರತದ ವನಿತೆಯರು, ದಕ್ಷಿಣ ಕೊರಿಯಾ ವಿರುದ್ಧ ೩-೨ ಅಂತರದ ಗೆಲುವು ಸಾಧಿಸಿದರು. ದೀಪಿಕಾ ಕುಮಾರಿ ಎರಡು ಗೋಲು ಬಾರಿಸಿದರೆ, ಸಂಗೀತಾ ಕುಮಾರಿ ಮತ್ತೊಂದು ಗೋಲು ಗಳಿಸುವ ಮೂಲಕ ತಂಡಕ್ಕೆ ಕೊಡುಗೆ ನೀಡಿದರು. ಕೊರಿಯಾ ಪರ ನಾಯಕಿ ಚಿಯೋನ್ ಯುನ್ಬಿ ಮತ್ತು ಲೀ ಯೂರಿ ತಲಾ ಒಂದು ಗೋಲು ಗಳಿಸಿದರು. ಇಂದು ಮತ್ತೆರಡು ಪಂದ್ಯಗಳು ಜರುಗಲಿದ್ದು, ಅಪರಾಹ್ನ ೧೨:೧೫ಕ್ಕೆ ದಕ್ಷಿಣ ಕೊರಿಯಾ ತಂಡ, ಮಲೇಷ್ಯಾವನ್ನು ಎದುರಿಸಲಿದೆ. ಮಧ್ಯಾಹ್ನ ೨:೩೦ಕ್ಕೆ ನಡೆಯಲಿರುವ ಮತ್ತೊಂದು ಪಂದ್ಯದಲ್ಲಿ ಚೀನಾ- ಜಪಾನ್ ಮುಖಾಮುಖಿಯಾಗಲಿವೆ.

<><*<><>*><>

ದಕ್ಷಿಣ ಆಫ್ರಿಕಾದ ಸೆಂಚೂರಿಯನ್‌ನಲ್ಲಿ ಇಂದು ಭಾರತ ಮತ್ತು ದಕ್ಷಿಣ ಆಫ್ರಿಕಾ ನಡುವೆ ಮೂರನೇ ಟಿ-೨೦ ಕ್ರಿಕೆಟ್ ಪಂದ್ಯ ನಡೆಯಲಿದೆ. ಭಾರತೀಯ ಕಾಲಮಾನ ರಾತ್ರಿ ೮.೩೦ಕ್ಕೆ ಪಂದ್ಯ ಆರಂಭವಾಗಲಿದೆ. ನಾಲ್ಕು ಪಂದ್ಯಗಳ ಈ ಸರಣಿಯಲ್ಲಿ ಭಾರತ ಮತ್ತು ದಕ್ಷಿಣ ಆಫ್ರಿಕಾ ೧-೧ ಅಂತರದಿಂದ ಸಮಬಲ ಸಾಧಿಸಿವೆ.

<><*<><>*><>

ಜಪಾನಿನ ಕುಮಾಮೊಟೊದಲ್ಲಿ ನಡೆಯುತ್ತಿರುವ ೨೦೨೪ರ ಮಾಸ್ಟರ್ಸ್ ಬ್ಯಾಡ್ಮಿಂಟನ್ ಪಂದ್ಯಾವಳಿಯಲ್ಲಿ, ಇಂದು ನಡೆಯುವ ಪಂದ್ಯಗಳಲ್ಲಿ, ಭಾರತೀಯ ಆಟಗಾರರಾದ, ಎರಡು ಬಾರಿ ಒಲಿಂಪಿಕ್ ಪದಕ ವಿಜೇತೆ ಪಿ.ವಿ. ಸಿಂಧು ಹಾಗೂ ಲಕ್ಷ್ಯ ಸೇನ್ ತಮ್ಮ ಮೊದಲ ಸುತ್ತಿನಲ್ಲಿ ಕಣಕ್ಕಿಳಿಯಲಿದ್ದಾರೆ. ನಿನ್ನೆ ನಡೆದ ತಮ್ಮ ಆರಂಭಿಕ ಪಂದ್ಯದಲ್ಲಿ ಭಾರತದ ಜೋಡಿ ತ್ರೀಸಾ ಜಾಲಿ ಮತ್ತು ಗಾಯತ್ರಿ ಗೋಪಿಚಂದ್ ಸೋಲನುಭವಿಸಿದ್ದಾರೆ. ಮಹಿಳೆಯರ ಡಬಲ್ಸ್ ಶ್ರೇಯಾಂಕದಲ್ಲಿ ೨೦ ನೇ ಸ್ಥಾನದಲ್ಲಿರುವ, ಕಾಮನ್‌ವೆಲ್ತ್ ಗೇಮ್ಸ್ನ ಕಂಚಿನ ಪದಕ ವಿಜೇತ ಬ್ಯಾಡ್ಮಿಂಟನ್ ಆಟಗಾರ್ತಿ ತ್ರೀಸಾ ಮತ್ತು ಗಾಯತ್ರಿ ಅವರು ೩೨ರ ಸುತ್ತಿನಲ್ಲಿ ೨೧-೧೬, ೨೧-೧೮ರ

ಅಂತರದೊಂದಿಗೆ ಚೀನಾ ತೈಪೆಯ ವಿಶ್ವ ೨೯ನೇ ಕ್ರಮಾಂಕದ ಜೋಡಿ ಲಿನ್ ಝಿಹ್ ಯುನ್-ಹ್ಸು ಯಿನ್ ಹುಯಿ ವಿರುದ್ಧ ಸೋಲು ಕಂಡರು.

<><*<> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <>*><>

<><*<>ನಮ್ಮ ಮುಂದಿನ ವಾರ್ತಾ ಪ್ರಸಾರ ಅಪರಾಹ್ನ ೧೨ ಕ್ಕೆ <>*><>